ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಉಪನ್ಯಾಸಕರುಗಳಿ ಗೆ ಯು.ಜಿ.ಸಿ. ವೇತನ ಶ್ರೇಣಿಯ ಬಾಕಿ ನೀಡುವ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

1450 (1723) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ದಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪದವಿ ಕಾಲೇಜು ಬಿ.ಎಡ್. ಹಾಗೂ ವಿಶ್ವವಿದ್ಯಾನಿಲಯದ ಉಪನ್ಯಾಸಕರುಗಳಿಗೆ ಯು.ಜಿ.ಸಿ. 6ನೇ ವೇತನ ಶ್ರೇಣಿಯ ಬಾಕಿ ನೀಡಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ ಎಷ್ಟು ಮಂದಿ ಉಪನ್ಯಾಸಕರಿಗೆ ಎಷ್ಟು ಮೊತ್ತದ ಬಾಕಿಯನ್ನು ಪಾವತಿಸಬೇಕಾಗಿರುತ್ತದೆ ;

(ಇ) ಸದರಿ ಬಾಕಿ ಮೊತ್ತವನ್ನು ಪಾವತಿಸುವಲ್ಲಿ ವಿಳಂಬಕ್ಕೆ ಕಾರಣಗಳೇನು;

(ಈ) ಯಾವ ಕಾಲಮಿತಿಯಲ್ಲಿ ಬಾಕಿ ಮೊತ್ತವನ್ನು ಪಾವತಿಸಲಾಗುವುದು?